# ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ
## ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಡಿ.ಎಸ್. ಅರುಣ್ ಇವರ
## ನಿಯಮ 72ರ ಗಮನ ಸೆಳೆಯುವ ಸೂಚನೆಗೆ ಹೇಳಿಕೆ

**ಸೂಚನೆ:**

ಹಿಂದುಳಿದ ವರ್ಗದಲ್ಲಿ ನೀಡುವ ವಿವಿಧ ಯೋಜನೆಗಳನ್ನು ಪಡೆಯಲು ಅತೀ ಹೆಚ್ಚು ದಾಖಲೆಗಳನ್ನು ಕೇಳುತ್ತಿರುವುದರಿಂದ, ಫಲಾನುಭವಿಗಳಿಗೆ ವಿನಾಕಾರಣ ತೊಂದರೆಯಾಗುತ್ತಿದ್ದು, ನಿಯಮಗಳ ಸರಳೀಕರಣ ಮಾಡುವ ಕುರಿತು.

**ಹೇಳಿಕೆ:**

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಹಿಂದುಳಿದ ವರ್ಗದವರ ಸಾಮಾಜಿಕ, ಶೈಕ್ಷಣಿಕ ಮತ್ತು ಆರ್ಥಿಕಾಭಿವೃದ್ಧಿಗಾಗಿ ಹಲವು ಯೋಜನೆ/ಕಾರ್ಯಕ್ರಮಗಳನ್ನು ಅನುಷ್ಠಾನ ಗೊಳಿಸಲಾಗುತ್ತಿದೆ.

ಇಲಾಖೆಯಿಂದ ಅನುಷ್ಠಾನಗೊಳಿಸಲಾಗುತ್ತಿರುವ ಕಾರ್ಯಕ್ರಮಗಳ ಪೈಕಿ ಪ್ರಮುಖವಾದ ಮೆಟ್ರಿಕ್ ಪೂರ್ವ ವಿದ್ಯಾರ್ಥಿ ವೇತನ ನೀಡಿಕೆ, ಮೆಟ್ರಿಕ್ ನಂತರ ವಿದ್ಯಾರ್ಥಿ ವೇತನ ನೀಡಿಕೆ, ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರ ವಿದ್ಯಾರ್ಥಿ ನಿಲಯಗಳಿಗೆ ಪ್ರವೇಶಾತಿ, ಶುಲ್ಕ ವಿನಾಯಿತಿ, ವಿದ್ಯಾಸಿರಿ, ತರಬೇತಿ ಇತ್ಯಾದಿ ಕಾರ್ಯಕ್ರಮಗಳನ್ನು ಆನ್ ಲೈನ್ ತಂತ್ರಾಂಶದ ಮೂಲಕ ಅನುಷ್ಠಾನ ಗೊಳಿಸಲಾಗುತ್ತಿದೆ. ವಿದ್ಯಾರ್ಥಿ ನಿಲಯಗಳಿಗೆ ಪ್ರವೇಶಾತಿ ಕಾರ್ಯಕ್ರಮವನ್ನು SHP PORTAL ನಲ್ಲಿ ಹಾಗೂ ವಿದ್ಯಾರ್ಥಿ ವೇತನ, ಶುಲ್ಕವಿನಾಯಿತಿ, ವಿದ್ಯಾಸಿರಿ ಕಾರ್ಯಕ್ರಮಗಳನ್ನು SSP PORTAL ಮೂಲಕ ಅನುಷ್ಠಾನಗೊಳಿಸಲಾಗುತ್ತಿದೆ. ಹಾಗೂ ವಿದ್ಯಾರ್ಥಿಗಳಿಗೆ DBT ತಂತ್ರಾಂಶದ ಮೂಲಕ ವಿದ್ಯಾಸಿರಿ, ವಿದ್ಯಾರ್ಥಿ ವೇತನ, ಶುಲ್ಕಮರುಪಾವತಿಯನ್ನು ಸಂದಾಯ ಮಾಡಲಾಗುತ್ತಿದೆ.

ಈ ಯೋಜನೆ/ ಕಾರ್ಯಕ್ರಮಗಳಿಗೆ ಆಯಾ ಕಾರ್ಯಕ್ರಮವಾರು ಪ್ರತ್ಯೇಕವಾಗಿ ಸರ್ಕಾರದಿಂದ ಆದೇಶ ಹಾಗೂ ಮಾರ್ಗಸೂಚಿಗಳನ್ನು ಹೊರಡಿಸಲಾಗಿದ್ದು, ಸದರಿ ಆದೇಶ ಹಾಗೂ ಮಾರ್ಗಸೂಚಿ ಗಳ ಅನ್ವಯ ವಿದ್ಯಾರ್ಥಿಗಳಿಂದ ಜಾತಿ ಹಾಗೂ ಆದಾಯಕ್ಕೆ ಸಂಬಂಧಪಟ್ಟ ಪ್ರಮಾಣ ಪತ್ರ, ವಿದ್ಯಾರ್ಹತೆ ಬಗ್ಗೆ ಪ್ರಮಾಣ ಪತ್ರ, ವಾಸಸ್ಥಳದ ಬಗ್ಗೆ ಪ್ರಮಾಣ ಪತ್ರ ಇತ್ಯಾದಿ ಕನಿಷ್ಠ ದಾಖಲಾತಿಗಳನ್ನು ಕಡ್ಡಾಯವಾಗಿ ಪಡೆಯಬೇಕಾಗಿರುತ್ತದೆ.

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿಯಲ್ಲಿ ಬರುವ ವಿವಿಧ ನಿಗಮಗಳಲ್ಲಿ ಪಾರದರ್ಶಕವಾಗಿ ಹಾಗೂ ಸರಳೀಕರಣ ವಿಧಾನದಿಂದ ಯೋಜನೆಗಳನ್ನು ಅನುಷ್ಠಾನಗೊಳಿಸಲು 2022-23ನೇ ಸಾಲಿನಿಂದ ಸ್ವಯಂ ಉದ್ಯೋಗ ಸಾಲ ಯೋಜನೆ, ಸಾಂಪ್ರದಾಯಿಕ ವೃತ್ತಿದಾರರ ಸಾಲ ಯೋಜನೆ, ಅರಿವು ಶೈಕ್ಷಣಿಕ ಸಾಲ ಯೋಜನೆ, ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಉನ್ನತ ವ್ಯಾಸಂಗಕ್ಕೆ ಸಾಲ ಯೋಜನೆ ಹಾಗೂ ಗಂಗಾ ಕಲ್ಯಾಣ ನೀರಾವರಿ ಯೋಜನೆಗಳಿಗೆ ಆನ್‌ಲೈನ್ ಸೇವಾ ಸಿಂಧು ಪೋರ್ಟಲ್ ಮುಖಾಂತರ ಅರ್ಜಿಗಳನ್ನು ಅಹ್ವಾನಿಸಲಾಗಿದೆ. ಅರ್ಜಿದಾರರು ತಮ್ಮ ಜಾತಿ ಮತ್ತು ಆದಾಯ ಪ್ರಮಾಣ ಪತ್ರದ ಆರ್‌ಡಿ ಸಂಖ್ಯೆ: ಹಾಗೂ ಆಧಾರ್ ಸಂಖ್ಯೆಯನ್ನು ನಮೂದಿಸುವ ಮೂಲಕ ಆನ್‌ಲೈನ್ ನಲ್ಲಿ ಅರ್ಜಿಯನ್ನು ಸಲ್ಲಿಸುವ ವ್ಯವಸ್ಥೆಯನ್ನು ಮಾಡಲಾಗಿರುತ್ತದೆ.

ಆದಾಗ್ಯೂ ಯೋಜನೆ/ ಕಾರ್ಯಕ್ರಮಗಳಿಗೆ ನಿಗಧಿಪಡಿಸಿರುವ ದಾಖಲಾತಿಗಳನ್ನು ಸರಳೀಕರಣ ಮಾಡುವ ಬಗ್ಗೆ ಸರ್ಕಾರಕ್ಕೆ ಯಾವುದೇ ಪ್ರಸ್ತಾವನೆಗಳು ಸ್ವೀಕೃತವಾಗಿರುವುದಿಲ್ಲ. ಇದಕ್ಕೆ ಸಂಬಂದಿಸಿದ ಪ್ರಸ್ತಾವನೆಗಳು ಸ್ವೀಕೃತವಾದಲ್ಲಿ ನಂತರ ನಿಯಮಾನುಸಾರ ಪರಿಶೀಲಿಸಲಾಗುವುದು.

**ಸಂಖ್ಯೆ:ಬಿಸಿಡಬ್ಲ್ಯೂ 130 ಬಿಎಂಎಸ್ 2023.**

**(ಕೋಟ ಶ್ರೀನಿವಾಸ ಪೂಜಾರಿ)**
ಸಮಾಜ ಕಲ್ಯಾಣ ಹಾಗೂ
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ